**ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಸಂಗೀತ ಚಿಲುಮೆ.**

531- ಶ್ರೀ ರಾಮಲಿಂಗರೆಡ್ಡಿ (ಜಯನಗರ) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) *ಬೆಂಗಳೂರು ನಗರದಲ್ಲಿರುವ ಲಾಲ್‌ಬಾಗ್ ಉದ್ಯಾನವನದಲ್ಲಿ ಸಂಗೀತ ಚಿಲುಮೆಯನ್ನು ನಿರ್ಮಿಸಲು ಸರ್ಕಾರ, ಖಾಸಗೀ ಸಂಸ್ಥೆಗಳ ಸಹಕಾರವನ್ನು ಹಾಗೂ ನೆರವನ್ನು ಪಡೆದುಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತದೆಯೇ?*

ಶ್ರೀ ಅಲ್ಲಂ ವೀರಭದ್ರಪ್ಪ (ತೋಟಗಾರಿಕೆ ರಾಜ್ಯ ಸಚಿವರು) :

ಅ) ಇಲ್ಲ.

**ಬೆಂಗಳೂರಿನ ಲಾಲ್‌ಬಾಗ್ ಉದ್ಯಾನವನದ ಅಭಿವೃದ್ಧಿ ಕಾರ್ಯಗಳು.**

532 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) *1999-2000ನೇ ಸಾಲಿನಲ್ಲಿ ಬೆಂಗಳೂರಿನ ಲಾಲ್‌ಬಾಗ್ ಉದ್ಯಾನವನದ ಅಭಿವೃದ್ಧಿಗಾಗಿ ಖರ್ಚು ಮಾಡಿರುವ ಹಣವೆಷ್ಟು?*

ಆ) *ಲಾಲ್‌ಬಾಗಿನ ಕೆರೆಯಲ್ಲಿನ ಹೂಳು ತೆಗೆದು ಶುದ್ಧೀಕರಿಸಿ ಪ್ರವಾಸಿಗಳ ಆಕರ್ಷಣಾ ಕೇಂದ್ರವನ್ನಾಗಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಇ) *ಲಾಲ್‌ಬಾಗ್‌ನಲ್ಲಿ ಪ್ರವಾಸಿಗರಿಗೆ ಹೆಚ್ಚಿನ ರಕ್ಷಣೆ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಈ) *ಲಾಲ್‌ಬಾಗ್‌ನಲ್ಲಿ ವಾಹನ ನಿಲುಗಡೆಗಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು?*

ಶ್ರೀ ಅಲ್ಲಂ ವೀರಭದ್ರಪ್ಪ (ತೋಟಗಾರಿಕೆ ರಾಜ್ಯ ಸಚಿವರು) :

ಅ) ರೂ. 14.50 ಲಕ್ಷಗಳು

ಆ) ಲಾಲ್‌ಬಾಗ್ ಉದ್ಯಾನವನದಲ್ಲಿ ಕೆರೆಯಲ್ಲಿರುವ ಹೂಳು ತೆಗೆಯಲು ಕೆರೆ ಏರಿಯನ್ನು ಭದ್ರಗೊಳಿಸಲು ರೂ. 31.00 ಲಕ್ಷಕ್ಕೆ ಹಾಗೂ ನೀರಿನ ಶುದ್ಧೀಕರಣ ಘಟಕ ಸ್ಥಾಪಿಸಲು ರೂ. 1.50 ಕೋಟಿ ರೂ ಗಳ ಯೋಜನಾ ವರದಿ ಸಿದ್ಧಪಡಿಸಲಾಗಿದೆ. ಅನುದಾನದ ಕೊರತೆಯಿಂದ ಈ ಕೆಲಸ ಕೈಗೊಳ್ಳಲಾಗಿರುವುದಿಲ್ಲ.

ಇ) ಲಾಲ್‌ಬಾಗ್ ಉಧ್ಯಾನವನಕ್ಕೆ ಬರುವ ಪ್ರವಾಸಿಗರ ಹೆಚ್ಚಿನ ರಕ್ಷಣೆಗೆ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

1) ಲಾಲ್‌ಬಾಗ್ ಮುಖ್ಯ ದ್ವಾರದ ಬಳಿ ಪೋಲೀಸ್ ಠಾಣೆಯನ್ನು ತೆರೆಯಲಾಗಿದೆ.